**ಪ್ರಧಾನ ಸಿವಿಲ್ ನ್ಯಾಯಾಧೀಶರವರ ನ್ಯಾಯಾಲಯ ಮತ್ತು ಜೆ ಎಂ ಎಫ್ ಸಿ, ಹರಿಹರ**

**ಸಿ.ಸಿ. 3030/2024**

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಭೋಧಿಸಲಾಯಿತು.** **ಪಿಡಬ್ಲ್ಯೂ 1**

**ದಿನಾಂಕಃ** 01.07.2026 **ಸಿಡಬ್ಲ್ಯೂ 3**

| | |
|---|---|
| ಹೆಸರು | ಸುರೇಶ |
| ತಂದೆಯ ಹೆಸರು | ರಂಗಪ್ಪ |
| ವಯಸ್ಸು | 45 ವರ್ಷ |
| ಉದ್ಯೋಗ | ಕೂಲಿ ಕೆಲಸ |
| ವಾಸ ಸ್ಥಳ | ದೇವರಬೆಳಕೆರೆ |

**ಮುಖ್ಯ ವಿಚಾರಣೆಃ** ಸಹಾಯಕ ಸರ್ಕಾರಿ ಅಭಿಯೋಜಕರಿಂದಃ

ಪೋಲೀಸರು ಸಹಿ ಮಾಡು ಎಂದು ಹೇಳಿದ್ದಕ್ಕೆ ನಾನು ಮಾಡಿರುತ್ತೇನೆ. ಅದರಲ್ಲಿ ಬರೆದಿರುವ ವಿಷಯ ನನಗೆ ಗೊತ್ತಿರುವುದಿಲ್ಲ. ಸಾಕ್ಷಿಯು ಸ್ಥಳ ಪಂಚನಾಮೆಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ1 ಹಾಗೂ ಸಾಕ್ಷಿಯ ಸಹಿಯನ್ನು ನಿಪಿ.1 ಎ ಎಂದು ಗುರುತಿಸಲಾಯಿತು. ಕಚ್ಚಾನಕಾಶೆ ನಿಪಿ.2 ಸಾಕ್ಷಿಯ ಸಹಿ 2 ಎ, ಪಂಚನಾಮೆ ಕಾಲಕ್ಕೆ ತೆಗೆದ ಪೋಟೋಗಳು ನಿಪಿ.3, 4 ಎಂದು, ವಾಹನ ಪರಿಶೀಲನಾ ಪಂಚನಾಮೆಯನ್ನು ನಿಪಿ.5, ಸಾಕ್ಷಿಯ ಸಹಿಯನ್ನು 5 ಎ, ಪೋಟೋ ನಿಪಿ.6 ಎಂದು ಗುರುತಿಸಲಾಯಿತು.

(ಈ ಹಂತದಲ್ಲಿ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಲು ಮಾನ್ಯ ಎಪಿಪಿ ಯವರು ಕೋರಿದ್ದು, ಸಂಗತಿಗಳನ್ನು ಪರಿಶೀಲಿಸಲಾಗಿ ಪ್ರತಿಕೂಲ ಸಾಕ್ಷಿಯನ್ನಾಗಿ ಪರಿಗಣಿಸಿ ಅವರಿಗೆ ಪಾಟೀಸವಾಲು ಮಾಡಲು ಅನುಮತಿಸಲಾಯಿತು)

**ಪಾಟೀ ಸವಾಲುಃ ಸಸಅ ರವರಿಂದಃ**

ದಿಃ08.05.2024 ರಂದು ನನ್ನನ್ನು ಮತ್ತು ಚಾಸಾ.2 ರವರನ್ನು ಗ್ರಾಮಾಂತರ ಪೋಲೀಸರು ಮಿಟ್ಲಕಟ್ಟೆ ಗ್ರಾಮ ಸಿರಿಗೆರೆ ರೈಸ್ ಮಿಲ್ ಹತ್ತಿರ ಪಂಚನಾಮೆಗೆ ಕರೆಸಿದ್ದರು ಎಂದರೆ ಸರಿಯಲ್ಲ. ಅಲ್ಲಿ ಚಾಸಾ.01 ರವರು ಹಾಜರಿದ್ದು ಅಪಘಾತ ಸ್ಥಳವನ್ನು ತೋರಿಸಿದ್ದು ಪೋಲೀಸರು ಬೆಳಗ್ಗೆ 10.30 ರಿಂದ 11.30 ರವರೆಗೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನಂತರ ನಮ್ಮನ್ನು ಪೋಲೀಸ್ ಠಾಣೆಗೆ ಕರೆದುಕೊಂಡು ಹೋಗಿದ್ದು ಅಲ್ಲ ಚಾಸಾ.1 ರವರು ಅಪಘಾತಕ್ಕೊಳಾಗಾದ ಮೋಟಾರ ಕೆಎ-17 ಹೆಚ್‌ಪಿ -4687 ವಾಹನವನ್ನು ತೋರಿಸಿದ್ದು ಅಲ್ಲಿ ಮಧ್ಯಾಹ್ನ 12.30 ರಿಂದ 1.45 ರವರೆಗೆ ಪಂಚನಾಮೆ ಮಾಡಿರುತ್ತಾರೆ ಎಂದರೆ ಸರಿಯಲ್ಲ. ನನ್ನ ಸಮಕ್ಷಮ ಪಂಚನಾಮೆ ಮಾಡಿದ್ದರೂ ಸಹ ಆರೋಪಿತರಿಗೆ ಸಹಾಯವಾಗಲಿ ಎಂದು ಸುಳ್ಳು ಸಾಕ್ಷಿ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ** ಆರೋಪಿತರ ಪರ ವಕೀಲರಿಂದಃ ಇರುವುದಿಲ್ಲ.

**ಮರುವಿಚಾರಣೆ ಇಲ್ಲ.**

(ಮುಕ್ತ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಲಾಯಿತು.)

ಓದಿ ಹೇಳಿ ಕೇಳಿ ಸರಿ ಇದೆ.

Sd/-

ಪ್ರಧಾನ ಸಿವಿಲ್ ನ್ಯಾಯಾಧೀಶರು

ಮತ್ತು ಜೆಎಂಎಫ್‌ಸಿ, ಹರಿಹರ.